# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಕ್ಕರೆ ನಿರ್ದೇಶನಾಲಯದ ಆಡಳಿತಾತ್ಮಕ ವೆಚ್ಚಗಳಿಗೆ ಸಂಬಂಧಿಸಿದಂತೆ 2019-20ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ ಮೊದಲನೇ ತ್ರೈಮಾಸಿಕ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ವಾಕೈ 57 ಆಂಆಸ(2) 2019, ದಿನಾಂಕ:16/04/2019.
2. ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಇವರ ಪ್ರಸ್ತಾವನೆ ಸಂಖ್ಯೆ: ಡಿಎಸ್‌ಕೆ/ಇಎಪಿ/50/2018-19/06, ದಿನಾಂಕ:02/04/2019.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ 2019-20ನೇ ಸಾಲಿನಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಡಿಯಲ್ಲಿ ಬರುವ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯಕ್ಕೆ ಸಂಬಂಧಿಸಿದಂತೆ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿಯಲ್ಲಿ ಮುಂದುವರಿದ ಕಾರ್ಯಕ್ರಮಗಳಿಗೆ ಅನುಬಂಧ-3ರಲ್ಲಿ ಸೂಚಿಸಿರುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯ ಇವರಿಗೆ ಸದರಿ ಆದೇಶದಲ್ಲಿನ ಷರತ್ತುಗಳನ್ನು ಪಾಲಿಸಬೇಕೆಂದು ನಿಬಂಧನೆಯನ್ನು ವಿಧಿಸಿ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆಯುಕ್ತರ ಪ್ರಸ್ತಾವನೆಯಲ್ಲಿ ಲೆಕ್ಕಶೀರ್ಷಿಕೆ 2852-08-201-0-01 ರಡಿ ಘೋಷಿಸಿರುವ ರೂ.233.00ಲಕ್ಷಗಳು ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ನಿರ್ವಹಣೆಯ ವೆಚ್ಚಗಳಿಗಾಗಿದ್ದು, ಈ ಮೊತ್ತವನ್ನು ವಿವಿಧ ಉಪ ಲೆಕ್ಕಶೀರ್ಷಿಕೆಗಳಡಿಯಲ್ಲಿ ಹಂಚಿಕೆ ಮಾಡಿರುವಂತೆ ಖಜಾನೆಯಿಂದ ಸೆಳೆದು ವೆಚ್ಚ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಲು ಕೋರಿರುತ್ತಾರೆ. ವಿವರ ಈ ಕೆಳಕಂಡಂತಿದೆ.

| ಕ್ರ.ಸಂ. | ಯೋಜನೆಯ ವಿವರ ಮತ್ತು ಲೆಕ್ಕಶೀರ್ಷಿಕೆ | ಕಲ್ಪಿಸಲಾದ ಆಯವ್ಯಯ (ರೂ.ಲಕ್ಷಗಳಲ್ಲಿ) |
|---|---|---|
| 1 | ಸಕ್ಕರೆ ನಿರ್ದೇಶನಾಲಯದ ಆಡಳಿತಾತ್ಮಕ ವೆಚ್ಚಗಳು - 2852-08-201-0-01 | 233.00 |

ಈ ಹಿನ್ನೆಲೆಯಲ್ಲಿ ಸಕ್ಕರೆ ನಿರ್ದೇಶನಾಲಯದ ಆಡಳಿತ ನಿರ್ವಹಣೆಯ ವೆಚ್ಚಗಳನ್ನು 2019-20ನೇ ಸಾಲಿಗೆ ಮುಂದುವರೆಸಿ ಮೊದಲನೇ ತ್ರೈಮಾಸಿಕ ಕಂತಿನ ಶೇ.25ರಷ್ಟು ಅನುದಾನ ರೂ.58.25ಲಕ್ಷಗಳನ್ನು ವಿವಿಧ ಉಪ ಲೆಕ್ಕಶೀರ್ಷಿಕೆಗಳಡಿಯಲ್ಲಿ ಹಂಚಿಕೆ ಮಾಡಿರುವಂತೆ ಖಜಾನೆ-2ರಿಂದ ಸೆಳೆದು ವೆಚ್ಚ ಮಾಡಲು ಆಡಳಿತಾತ್ಮಕ ಅನುಮೋದನೆಯೊಂದಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ವಾಕೈ 10 ಸಸಕಾ 2019, ಬೆಂಗಳೂರು, ದಿನಾಂಕ:25 /04/2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದ ಆಡಳಿತ ನಿರ್ವಹಣೆಯ ವೆಚ್ಚಗಳ ಲೆಕ್ಕಶೀರ್ಷಿಕೆ "2852-08-201-0-01" ರಡಿ ಆಯವ್ಯಯದಲ್ಲಿ ಘೋಷಿಸಿರುವ ರೂ.233.00ಲಕ್ಷಗಳ ಪೈಕಿ ಶೇಕಡ 25ರಷ್ಟು ಅನುದಾನ ರೂ.58.25ಲಕ್ಷಗಳನ್ನು ವಿವಿಧ ಉಪ ಲೆಕ್ಕಶೀರ್ಷಿಕೆಗಳಡಿಯಲ್ಲಿ ಹಂಚಿಕೆ ಮಾಡಿರುವಂತೆ ಖಜಾನೆ-2ರಿಂದ ಸೆಳೆದು ವೆಚ್ಚ ಮಾಡಲು ಆಡಳಿತಾತ್ಮಕ ಅನುಮೋದನೆ ನೀಡಿ ಬಿಡುಗಡೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಆದೇಶ ಸಂಖ್ಯೆ: ವಾಕೈ 57 ಆಂಆಸ (2) 2019, ದಿನಾಂಕ: 16/04/2019ರನ್ವಯ ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು /ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಅನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜೆ.ಶೀಲಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸಕ್ಕರೆ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ – ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವಂತೆ ಹಾಗೂ 25 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಇ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ À', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560 001.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನÀ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560 001.
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560 001.
4. ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು, ಕರ್ನಾಟಕ ಗೃಹ ಮಂಡಳಿ ಕಾಂಪ್ಲೆಕ್ಸ್, 5ನೇ ಮಹಡಿ, "ಎಫ್ "ಬ್ಲಾಕ್, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560009.
5. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು,
6. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು,
7. ಖಜಾನಾಧಿಕಾರಿಯವರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು,
8. ಖಜಾನಾಧಿಕಾರಿಯವರು, ಜಿಲ್ಲಾ ಖಜಾನೆ (ನಗರ), ನೃಪತುಂಗ ರಸ್ತೆ, ಬೆಂಗಳೂರು,
9. ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿ
10. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ(ಸಕ್ಕರೆ), ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.